ಹೆಲ್ಪ್‌ಲೈನ್ / Helpline : 080-25582559
ಈಮೇಲ್ / Email : contact@kspcb.gov.in
ವೆಬ್‌ಸೈಟ್ / Website : kspcb.karnataka.gov.in

☎ 080-25581383, 25589112
080-25589113, 25589114

# ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ
# Karnataka State Pollution Control Board

"ಪರಿಸರ ಭವನ", 1 ರಿಂದ 5ನೇ ಮಹಡಿಗಳು, ನಂ. 49, ಚರ್ಚ್ ಸ್ಟ್ರೀಟ್, ಬೆಂಗಳೂರು - 560 001, ಕರ್ನಾಟಕ ರಾಜ್ಯ, ಭಾರತ
"Parisara Bhavan", 1st to 5th Floor, # 49, Church Street, Bangalore - 560 001, Karnataka State, India

ಸಂಖ್ಯೆ:ಮಾನಿಮಂ/ಜಾ.ಕೋ/2023-24/ 2710 ದಿನಾಂಕ 21 AUG 2023

ರವಾನಿಸಲಾಗಿದೆ

## ಸುತ್ತೋಲೆ

**ವಿಷಯ:** ಜಲ ಮಾಲಿನ್ಯ (ನಿವಾರಣಾ ಮತ್ತು ನಿಯಂತ್ರಣ ಕಾಯ್ದೆ) 1974 ಕಲಂ 33 (ಎ) ಪ್ರಕಾರ ಕೆರೆಗಳಲ್ಲಿ ಮತ್ತು ಇತರೆ ಜಲಮೂಲಗಳಲ್ಲಿ ಪ್ಲಾಸ್ಟರ್ ಆಫ್ ಪ್ಯಾರೀಸ್ ಮತ್ತು ಬಣ್ಣದ ವಿಗ್ರಹಗಳ ವಿಸರ್ಜನೆಯನ್ನು ನಿಷೇದಿಸಿರುವ ಕುರಿತು ತೆಗೆದುಕೊಳ್ಳಬೇಕಾದ ಕ್ರಮಗಳು.

**ಉಲ್ಲೇಖ:**
1) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ದಿನಾಂಕ 20/07/2016 ರಂದು ಜಲ ಮಾಲಿನ್ಯ (ತಡೆ ಮತ್ತು ನಿಯಂತ್ರಣ) ಕಾಯ್ದೆ 1974, ಕಲಂ 33 (ಎ) ರ ಅಡಿಯಲ್ಲಿ ನೀಡಿರುವ ನಿರ್ದೇಶನಗಳು.
2) ಕರ್ನಾಟಕ ರಾಜ್ಯ ಸರ್ಕಾರ ಶಬ್ಧ ಮಾಲಿನ್ಯ ಕುರಿತಂತೆ ಹೊರಡಿಸಿರುವ ಸುತ್ತೋಲೆ ಪತ್ರ ಸಂಖ್ಯೆ:ಅಪಜೀ 128 ಇಪಿಸಿ 2022, ದಿನಾಂಕ 10/05/2022 ಹಾಗೂ ಸ್ಪಷ್ಟೀಕರಣ ಸುತ್ತೋಲೆ ದಿನಾಂಕ 03/06/2022.
3) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಪರಿಸರ ಸ್ನೇಹಿ ಗಣೇಶ ಹಬ್ಬ ಆಚರಿಸುವ ಕುರಿತಾಗಿ ಹೊರಡಿಸಲಾಗಿರುವ ಮಾರ್ಗಸೂಚಿಗಳು ಸಂಖ್ಯೆ:ಮಾನಿಮಂ/ಜಾ.ಕೋ/2022-23/3310, ದಿನಾಂಕ 11/08/2022.
4) ಕರ್ನಾಟಕ ಸರ್ಕಾರದಿಂದ ಏಕ ಬಳಕೆಯ ಪ್ಲಾಸ್ಟಿಕ್ (SUP) ವಸ್ತುಗಳ ಉತ್ಪಾದನೆ, ಸಂಗ್ರಹಣೆ, ವಿತರಣೆ, ಮಾರಾಟ ಮತ್ತು ಬಳಕೆಯನ್ನು ನಿಷೇಧಿಸುವ ಸಂಬಂಧದ ಬಗ್ಗೆ ಹಾಗೂ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ (ತಿದ್ದುಪಡಿ) ನಿಯಮಗಳ ಅನುಷ್ಠಾನದ ಕುರಿತು ಹೊರಡಿಸಿರುವ ಸುತ್ತೋಲೆ ಸಂಖ್ಯೆ:FEE 17 EPC 2012, ದಿನಾಂಕ 30.06.2022.

**-**-**-**

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತಮ್ಮ ಆದ್ಯಗಮನವನ್ನು ಉಲ್ಲೇಖಿತ ಪತ್ರಗಳನ್ವಯ ಮಂಡಳಿಯು ನೀಡಿರುವ ನಿರ್ದೇಶನದತ್ತ ಗಮನ ಸೆಳೆಯಲಾಗಿದೆ. ಸದರಿ ನಿರ್ದೇಶನವು ಸ್ವಯಂವೇದ್ಯವಾಗಿರುತ್ತದೆ. ಈ ನಿರ್ದೇಶನವನ್ನು ಜಲ ಮಾಲಿನ್ಯ (ತಡೆ ಮತ್ತು ನಿಯಂತ್ರಣ) ಕಾಯ್ದೆ 1974 ಕಲಂ 33 (A) ಅಡಿಯಲ್ಲಿ ಹೊರಡಿಸಲಾಗಿದ್ದು, ಇದರ ಪಾಲನೆ ಸಂಸ್ಥೆಗಳ ಮುಖ್ಯ ಜವಾಬ್ದಾರಿಯಾಗಿರುತ್ತದೆ. ಸದರಿ ನಿರ್ದೇಶನದಂತೆ, ಜಲ ಮೂಲ (ನದಿ/ಕೆರೆ/ಇತ್ಯಾದಿ) ಗಳಲ್ಲಿ ಪ್ಲಾಸ್ಟರ್ ಆಫ್ ಪ್ಯಾರೀಸ್ ಮತ್ತು ಬಣ್ಣ ಲೇಪಿತ ವಿಗ್ರಹಗಳ ವಿಸರ್ಜನೆಯನ್ನು ನಿಷೇದಿಸಲಾಗಿದೆ. ಈ ನಿರ್ದೇಶನವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವುದು ತಮ್ಮ ಆದ್ಯ ಕರ್ತವ್ಯವಾಗಿದ್ದು, ಈ ಕೆಳಕಂಡ ಕ್ರಮಗಳನ್ನು ಈ ತಕ್ಷಣ ಕೈಗೊಳ್ಳಬೇಕಾಗಿದೆ.

o/c

1) ಸ್ಥಳೀಯ ಸಂಸ್ಥೆಗಳು ಪಾಸ್ಟರ್ ಆಫ್ ಪ್ಯಾರೀಸ್‌ನಿಂದ ಮಾಡಿದ ಹಾಗೂ ಬಣ್ಣ ಲೇಪಿತವಾದ ಗಣೇಶ ವಿಗ್ರಹಗಳು ಮತ್ತು ಮೂರ್ತಿಗಳನ್ನು ತಯಾರಿಸುವ ಮತ್ತು ಮಾರಾಟ ಮಾಡುವ ವ್ಯಕ್ತಿಗಳಿಗೆ/ಸಂಸ್ಥೆಗಳಿಗೆ ಲೈಸೆನ್ಸನ್ನು ನೀಡದಿರುವಂತೆ ಹಾಗೂ ಈಗಾಗಲೇ ನೀಡಿದ್ದಲ್ಲಿ ಈ ತಕ್ಷಣ ಹಿಂಪಡೆಯಲು ಸೂಚಿಸಲಾಗಿದೆ. ಮುಂದುವರೆದು, ಅನಧಿಕೃತವಾಗಿ ತಯಾರಿ/ಮಾರಾಟ ಮಾಡುತ್ತಿರುವ ವ್ಯಕ್ತಿ ಅಥವಾ ಸಂಸ್ಥೆಗಳ ಮೇಲೆ ತಮ್ಮ

........2

ನಗರಸಭೆ/ಪುರಸಭೆ/ಪಂಚಾಯಿತಿ ಕಾಯ್ದೆ ಪ್ರಕಾರ ಕಾನೂನು ಕ್ರಮ ಜರುಗಿಸುವುದು ಹಾಗೂ ಸಾಮಾಗ್ರಿಗಳನ್ನು ವಶಪಡಿಸಿಕೊಳ್ಳುವುದು. ಇದು ಸ್ಥಳೀಯ ಸಂಸ್ಥೆಗಳ ಆದ್ಯ ಕರ್ತವ್ಯವಾಗಿರುತ್ತದೆ. ಇದನ್ನು ಉಲ್ಲೇಖ (1) ರ ಅಧಿಸೂಚನೆಯ ಕ್ರಮ ಸಂಖ್ಯೆ 05 ರಲ್ಲಿ ಸ್ಪಷ್ಟವಾಗಿ ನಮೂದಿಸಲಾಗಿದೆ.

2) ಮೇಲಿನ ನಿಷೇಧ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಲು ಜಾಹೀರಾತು ಮತ್ತು ವ್ಯಾಪಕ ಜನ ಜಾಗೃತಿ ಶಿಬಿರ/ಕಾರ್ಯಕ್ರಮಗಳನ್ನು ಕೈಗೊಂಡು ಈ ನಿರ್ದೇಶನಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದು ಸಹ ಸ್ಥಳೀಯ ಸಂಸ್ಥೆಗಳ ಜವಾಬ್ದಾರಿಯಾಗಿರುತ್ತದೆ.

3) ಮೇಲಿನ ನಿರ್ದೇಶನಗಳನ್ನು ಜಾರಿಗೊಳಿಸಲು ಪೋಲೀಸ್ ಇಲಾಖೆ, ಸ್ಥಳೀಯ ಸರ್ಕಾರೇತರ ಸಂಸ್ಥೆಗಳು ಮತ್ತು ಸ್ಥಳೀಯ ನಾಗರೀಕರ ನೆರವು ಪಡೆಯಬಹುದಾಗಿರುತ್ತದೆ.

4) ಸಂಪೂರ್ಣ ಮಣ್ಣಿನಿಂದ ಹಾಗೂ ಬಣ್ಣ ಲೇಪಿತವಲ್ಲದ ವಿಗ್ರಹಗಳನ್ನು ಮಾತ್ರ ಜಲ ಮೂಲ (ನದಿ ಕೆರೆ/ಇತ್ಯಾದಿ)ಗಳ ಬಳಿ ವಿಸರ್ಜನೆ ಮಾಡಲು ವ್ಯವಸ್ಥೆ ಮಾಡುವುದು ಹಾಗೂ ಘನ ತ್ಯಾಜ್ಯಗಳನ್ನು ವಿಗ್ರಹಗಳ ಜೊತೆ ವಿಸರ್ಜಿಸಲು ಅವಕಾಶ ನೀಡದಂತೆ, ವ್ಯವಸ್ಥೆ ಮಾಡಬೇಕಾಗಿರುತ್ತದೆ. ಘನತ್ಯಾಜ್ಯಗಳನ್ನು ಪ್ರತ್ಯೇಕವಾಗಿ ನಿಯಮಾವಳಿಗಳ ಪ್ರಕಾರ ವಿಲೇವಾರಿ ಮಾಡಬಹುದು.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಮೂರ್ತಿಗಳ ವಿಸರ್ಜನೆ ಕುರಿತು ದಿನಾಂಕ 11/08/2022 ರಂದು ಮಾರ್ಗಸೂಚಿಗಳನ್ನು ಹೊರಡಿಸಿದ್ದು, ಸದರಿ ಮಾರ್ಗಸೂಚಿಗಳನ್ನು ಈಗಾಗಲೇ ಇ-ಮೇಲ್ ಮೂಲಕ ಕಳುಹಿಸಿಕೊಡಲಾಗಿರುತ್ತದೆ. ಆದರೂ ಮತ್ತೊಮ್ಮೆ ಸದರಿ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.

ಕರ್ನಾಟಕ ಸರ್ಕಾರವು ಈಗಾಗಲೇ ಉಲ್ಲೇಖಿತ ಪತ್ರ (2) ರಲ್ಲಿ ಪರಿಸರ (ಸಂರಕ್ಷಣೆ) ಕಾಯ್ದೆ 1986 ರ ಅಡಿಯಲ್ಲಿ ಶಬ್ದ ಮಾಲಿನ್ಯ (ನಿಬಂಧನೆ ಮತ್ತು ನಿಯಂತ್ರಣ) ನಿಯಮಗಳು, 2000 ರ ನಿಬಂಧನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ದಿನಾಂಕ 11/05/2022 ರಂದು ಸುತ್ತೋಲೆ ಹೊರಡಿಸಲಾಗಿರುತ್ತದೆ, ಅಲ್ಲದೆ, ಸ್ಪಷ್ಟೀಕರಣ ನೀಡುತ್ತಾ ದಿನಾಂಕ 03/06/2022 ರಂದು ಸುತ್ತೋಲೆಯನ್ನು ಹೊರಡಿಸಿರುತ್ತಾರೆ. ಸದರಿ ಸುತ್ತೋಲೆಗಳಲ್ಲಿ ಸೂಚಿಸಿರುವಂತೆ, ಕೆಳಗಿನ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

1) ಶಬ್ದ ಮಾಲಿನ್ಯ (ನಿರ್ಬಂಧ ಮತ್ತು ನಿಯಂತ್ರಣ) ನಿಯಮಗಳು, 2000 ರ ನಿಯಮಗಳು 2 (ಸಿ) ರಡಿಯಲ್ಲಿ ವ್ಯಾಖ್ಯಾನಿಸಲಾದ ನಿಯೋಜಿತ ಪ್ರಾಧಿಕಾರದಿಂದ ಲಿಖಿತ ಅನುಮತಿಯನ್ನು ಪಡೆಯದ ಹೊರತು ಧ್ವನಿವರ್ಧಕ, ಸಾರ್ವಜನಿಕ ಗಣೇಶ ಪೆಂಡಾಲ್‌ಗಳಲ್ಲಿ ಬಳಸುವ ವಿದ್ಯುನ್ಮಾನ ಉಪಕರಣಗಳು ಮತ್ತು ಶಬ್ದ ಉಂಟು ಮಾಡುವ ಉಪಕರಣಗಳನ್ನು ಬಳಸುವಂತಿಲ್ಲ.

2) ಶಬ್ದ ಮಾಲಿನ್ಯ (ನಿರ್ಬಂಧ ಮತ್ತು ನಿಯಂತ್ರಣ) ನಿಯಮಗಳು, 2000 ರನ್ವಯ ದಿನಾಂಕ: 10/05/2022 ರಂದು ಹೊರಡಿಸಿರುವ ಸುತ್ತೋಲೆಯಂತೆ ನಿಬಂಧನೆಗಳಿಗೆ ಅನುಸಾರವಾಗಿ ಧ್ವನಿವರ್ಧಕ/ ಸಾರ್ವಜನಿಕ ಗಣೇಶ ಪೆಂಡಾಲ್‌ಗಳಲ್ಲಿ ಬಳಸುವ ವಿದ್ಯುನ್ಮಾನ ಉಪಕರಣಗಳು ಮತ್ತು ಶಬ್ದ ಉಂಟು ಮಾಡುವ ಉಪಕರಣಗಳ ಬಳಕೆಗೆ ಅನುಮತಿ ಕೋರಿ ನಿರ್ದಿಷ್ಟ ಅರ್ಜಿ ನಮೂನೆಯನ್ನು ಸಲ್ಲಿಸಿ ಅನುಮತಿ ಪಡೆಯತಕ್ಕದ್ದು.

...3

3) ಸಾಂದರ್ಭಿಕವಾಗಿ ಗಣೇಶ ಹಬ್ಬದ ಸಂದರ್ಭದಲ್ಲಿ 7 ದಿನಗಳಿಗೆ ಮೀರದಂತೆ ನಿರಂತರ ಬಳಕೆಗೆ ಧ್ವನಿವರ್ಧಕ/ ಸಾರ್ವಜನಿಕ ಗಣೇಶ ಪೆಂಡಾಲ್‌ಗಳಲ್ಲಿ ಬಳಸುವ ವಿದ್ಯುನ್ಮಾನ ಉಪಕರಣಗಳು ಮತ್ತು ಶಬ್ಧ ಉಂಟು ಮಾಡುವ ಉಪಕರಣಗಳನ್ನು ಬಳಸಲು ಪೊಲೀಸ್ ಇಲಾಖೆಯಿಂದ ಅನುಮತಿ/ಪರವಾನಗಿಯನ್ನು ಕರ್ನಾಟಕ ಪೊಲೀಸ್ ಕಾಯ್ದೆ, 1963 ರನ್ವಯ ಮತ್ತು ಪ್ರಸ್ತುತ ಚಾಲ್ತಿಯಲ್ಲಿರುವ ಸಂಬಂಧಿಸಿದ ಮಾರ್ಗಸೂಚಿಗಳನ್ವಯ ಪಡೆಯುವುದು. ಹಾಗೆ ನೀಡಲಾದ ಅನುಮತಿ/ಪರವಾನಗಿಯು ಶಬ್ದ ಮಾಲಿನ್ಯ (ನಿರ್ಬಂಧ ಮತ್ತು ನಿಯಂತ್ರಣ) ನಿಯಮಗಳು, 2000 ಮತ್ತು ದಿನಾಂಕ 13/08/2002 ರ ಸರ್ಕಾರಿ ಆದೇಶದ ನಿಬಂಧನೆಗಳನ್ನು ಸಹ ಅನುಸರಿಸತಕ್ಕದ್ದು.

4) ಶಬ್ದ ಮಾಲಿನ್ಯ (ನಿರ್ಬಂಧ ಮತ್ತು ನಿಯಂತ್ರಣ) ನಿಯಮಗಳು, 2000 ರ ಅನುಷ್ಠಾನಕ್ಕಾಗಿ ಹೊರಡಿಸಲಾದ ದಿನಾಂಕ 10/05/2022 ರ ಸುತ್ತೋಲೆಯನ್ವಯ ವಲಯವಾರು ನಿರ್ಬಂಧನೆಗಳನ್ನು ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಅಡಿಯಲ್ಲಿ ಸಿಧ್ಧಪಡಿಸಲಾದ ಸಮಗ್ರ ಅಭಿವೃಧ್ಧಿ, ಯೋಜನೆ ಅನುಸಾರ ಅನುಷ್ಠಾನಗೊಳಿಸುವುದು.

ಮುಂದುವರೆದಂತೆ, ಕರ್ನಾಟಕ ಸರ್ಕಾರದಿಂದ ಈಗಾಗಲೇ ಏಕ ಬಳಕೆಯ ಪ್ಲಾಸ್ಟಿಕ್ (SUP) ವಸ್ತುಗಳ ಉತ್ಪಾದನೆ, ಸಂಗ್ರಹಣೆ, ವಿತರಣೆ, ಮಾರಾಟ ಮತ್ತು ಬಳಕೆಯನ್ನು ನಿಷೇಧಿಸುವ ಸಂಬಂಧದ ಬಗ್ಗೆ ಹಾಗೂ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ (ತಿದ್ದುಪಡಿ) ನಿಯಮಗಳ ಅನುಷ್ಠಾನದ ಕುರಿತು ದಿನಾಂಕ 30/06/2022 ರಂದು ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ. ಸದರಿ ಸುತ್ತೋಲೆಯಂತೆ ಗಣೇಶ ಹಬ್ಬ ಆಚರಿಸಿರುವ ಸಂದರ್ಭದಲ್ಲಿ ಈ ಕೆಳಕಂಡ ನಿಯಮಗಳನ್ನು ಪಾಲಿಸತಕ್ಕದ್ದು.

1) ಗಣೇಶ ಹಬ್ಬದ ಸಂದರ್ಭದಲ್ಲಿ ಸಾರ್ವಜನಿಕ ಗಣೇಶ ಪೆಂಡಾಲ್‌ಗಳಲ್ಲಿ ಬಲೂನ್‌ಗಳು, ಬಲೂನ್‌ಗಳಿಗೆ ಬಳಸುವ ಪ್ಲಾಸ್ಟಿಕ್ ಸ್ಟಿಕ್‌ಗಳು, ಪ್ಲಾಸ್ಟಿಕ್ ಕ್ಯಾಂಡಿ ಸ್ಟಿಕ್‌ಗಳು, ಪ್ಲಾಸ್ಟಿಕ್ ಐಸ್‌ಕ್ರೀಮ್ ಸ್ಟಿಕ್‌ಗಳು, ಅಲಂಕಾರಕ್ಕಾಗಿ ಬಳಸುವ ಪಾಲಿಸ್ಟೈರೀನ್ [ಥರ್ಮೋಕೋಲ್] ಗಳನ್ನು ಬಳಸದಂತೆ ನಿಗವಹಿಸುವುದು.

2) ಎಲ್ಲಾ ರೀತಿಯ ಪ್ಲಾಸ್ಟಿಕ್ ಕ್ಯಾರಿ ಬ್ಯಾಗ್‌ಗಳು (including Compostable, Bio-degradable and non-woven sacks irrespective of size and thickness) ಪ್ಲಾಸ್ಟಿಕ್ ಧ್ವಜಗಳು, ಅಂಟಿಕೊಳ್ಳುವ ಫಿಲ್ಮ್‌ಗಳು, ಎಲ್ಲಾ ದಪ್ಪದ ಡೈನಿಂಗ್ ಟೇಬಲ್‌ನಲ್ಲಿ ಹರಡಲು ಬಳಸುವ ಪ್ಲಾಸ್ಟಿಕ್ ಹಾಳೆಗಳು, ಸ್ಟ್ರಾಗಳು, ಪ್ಲಾಸ್ಟಿಕ್ ಮೈಕ್ರೋ ಮಣಿಗಳಿಂದ ಮಾಡಿದ ವಸ್ತುಗಳು, ಪ್ಲಾಸ್ಟಿಕ್ ಪ್ಲೇಟ್‌ಗಳು, ಪ್ಲಾಸ್ಟಿಕ್ ಕಪ್‌ಗಳು ಮತ್ತು ಲೋಟಗಳು, ಫೋರ್ಕ್‌ಗಳು, ಪ್ಲಾಸ್ಟಿಕ್ ಚಮಚಗಳು, ಪ್ಲಾಸ್ಟಿಕ್ ಚಾಕುಗಳು, ಪ್ಲಾಸ್ಟಿಕ್ ಟ್ರೇಗಳು, ಸ್ವೀಟ್ ಬಾಕ್ಸ್‌ಗಳು/ಆಮಂತ್ರಣ ಪತ್ರಗಳು/ಸಿಗರೇಟ್ ಪ್ಯಾಕೆಟ್‌ಗಳ ಸುತ್ತ ಸುತ್ತುವ ಪದರ ಅಥವಾ ಪ್ಯಾಕಿಂಗ್ ಫಿಲ್ಮ್‌ಗಳು ಮತ್ತು ಪ್ಲಾಸ್ಟಿಕ್ ಸ್ಟಿಕರ್‌ಗಳು, ನಿಷೇಧಿತವಾಗಿರುವ ಹಿನ್ನೆಲೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ರಾಜ್ಯದ ಎಲ್ಲಾ ನಗರಸಭೆ, ಪಾಲಿಕೆ, ಅಧಿಕಾರಿಗಳು, ಮಾರ್ಷಲ್‌ಗಳು ಹಾಗೂ ರಾಜ್ಯದ ಎಲ್ಲಾ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬಳಸದಂತೆ ನಿಗವಹಿಸುವುದು.

........4

ಈ ಸಾಲಿನ ಅಂದರೆ 2022-23 ರ ಗಣೇಶ ಚತುರ್ಥಿಗೆ ಮುಂಚಿತವಾಗಿ ಮೇಲಿನ ನಿರ್ದೇಶನ ಹಾಗೂ ಮಾರ್ಗಸೂಚಿಗಳನ್ನು ಜಾರಿಗೆ ತರಬೇಕಾಗಿರುವುದರಿಂದ, ಈ ಬಗ್ಗೆ ತಾವು ಸಾಕಷ್ಟು ಮುಂಜಾಗ್ರತೆ ಕ್ರಮಕೈಗೊಳ್ಳಬೇಕಾಗಿರುತ್ತದೆ. ಮುಂದುವರೆದು ಉಲ್ಲೇಖಿತ ಪತ್ರಗಳಲ್ಲಿ ನೀಡಿರುವ ನಿರ್ದೇಶನಗಳು/ನಿಯಮಗಳು, ಜಲ ಮಾಲಿನ್ಯ (ತಡೆ ಮತ್ತು ನಿಯಂತ್ರಣ) ಕಾಯ್ದೆ 1974 ಕಲಂ 33 (ಎ), ಪರಿಸರ (ಸಂರಕ್ಷಣೆ) ಕಾಯ್ದೆ 1986 ರ ಅಡಿಯಲ್ಲಿ ಶಬ್ದ ಮಾಲಿನ್ಯ (ನಿಬಂಧನೆ ಮತ್ತು ನಿಯಂತ್ರಣ) ನಿಯಮಗಳು, 2000 ರ ನಿಬಂಧನೆ / ಕರ್ನಾಟಕ ಸರ್ಕಾರವು 11.03.2016 ರಲ್ಲಿ ಕೆಲವು ಪ್ಲಾಸ್ಟಿಕ್ ವಸ್ತುಗಳನ್ನು ನಿಷೇದಿಸಿರುವ ಅಧಿಸೂಚನೆ ಹಾಗೂ ಭಾರತ ಸರ್ಕಾರವು ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ ನಿಯಮಗಳು, 2016 ರ ನಿಯಮ 4(2) ಕ್ಕೆ ತಿದ್ದುಪಡಿಯನ್ನು ಅಧಿಸೂಚನೆ ಸಂಖ್ಯೆ: (G.S.R.No. 571 (E)) ದಿನಾಂಕ 12ನೇ ಆಗಸ್ಟ್, 2021 ರಂದು ತಂದಿದ್ದು, ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ (ತಿದ್ದುಪಡಿ) ನಿಯಮಗಳು, 2021 ರಲ್ಲಿ ಹೊರಡಿಸಿರುವುದರಿಂದ, ಇವುಗಳ ಉಲ್ಲಂಘನೆಯು ಸದರಿ ಕಾಯ್ದೆ/ಅಧಿಸೂಚನೆಗಳ ಶಿಕ್ಷಾರ್ಹ ಅಪರಾಧವಾಗಿದ್ದು, ದಂಡವನ್ನು ಸಹ ಒಳಗೊಂಡಿರುತ್ತದೆ ಎಂಬ ವಿಚಾರವನ್ನು ಸಾರ್ವಜನಿಕರ ಗಮನಕ್ಕೆ ತರುವುದು. ಈ ನಿರ್ದೇಶನ ಹಾಗೂ ಮಾರ್ಗಸೂಚಿಗಳ ಜಾರಿ ಬಗ್ಗೆ ಯಾವುದೇ ಸಲಹೆ ಸೂಚನೆ ಬೇಕಾಗಿದ್ದಲ್ಲಿ ಉಲ್ಲೇಖದಲ್ಲಿ ತಿಳಿಸಿರುವ ಅಧಿಸೂಚನೆಯ ವಿವರಗಳನ್ನು ಪಡೆಯಲು ಆ ವ್ಯಾಪ್ತಿಯ ಮಂಡಳಿಯ ಪ್ರಾದೇಶಿಕ ಕಛೇರಿಯನ್ನು ಸಂಪರ್ಕಿಸಬಹುದಾಗಿದೆ.

**ಸಹಿ/-**
**ಸದಸ್ಯ ಕಾರ್ಯದರ್ಶಿ**

**ಇವರಿಗೆ,**

1. ಆಯುಕ್ತರು, ಬಿ.ಬಿ.ಎಂ.ಪಿ., ಎನ್.ಆರ್.ವೃತ್ತ, ನರಸಿಂಹರಾಜ ರಸ್ತೆ, ಬೆಂಗಳೂರು-02.
2. ಆಯುಕ್ತರು, ಬೆಂಗಳೂರು ನಗರ ಪೋಲೀಸ್, ನಂ.01, ಇನ್‌ಫ್ಯಾಂಟ್ರಿ ರಸ್ತೆ (ಸ್ಪರ್ಶ್ ಹಾಸ್ಪಿಟಲ್ ಹತ್ತಿರ), ಬೆಂಗಳೂರು-01.
3. ಆಯುಕ್ತರು, ಸಾರಿಗೆ ಇಲಾಖೆ, ನಂ.222, 2ನೇ ಮಹಡಿ, ಬಿ.ಎಂ.ಟಿ.ಸಿ., ಕಟ್ಟಡ, ಸೆಂಟ್ರಲ್ ಕಛೇರಿಗಳು (ಬಿಗ್ ಬಜ್ಜಾರ್ ಹತ್ತಿರ), ಶಾಂತಿನಗರ, ಬೆಂಗಳೂರು-27.
4. ಆಯುಕ್ತರು, ಎಲ್ಲಾ ಮಹಾನಗರ ಪಾಲಿಕೆಗಳು, ರವರ ಮಾಹಿತಿಗಾಗಿ. ಸ್ಥಳೀಯ ಸಂಸ್ಥೆಗಳಿಗೆ ಸೂಕ್ತ ನಿರ್ದೇಶನಕ್ಕಾಗಿ ಕೋರಿಕೆ.
5. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, 7ನೇ ಮಹಡಿ, ವಿ.ವಿ.ಟವರ್, ಡಾ॥ ಅಂಬೇಡ್ಕರ್ ರಸ್ತೆ, ಬೆಂಗಳೂರು, ರವರ ಮಾಹಿತಿಗಾಗಿ. ಸ್ಥಳೀಯ ಸಂಸ್ಥೆಗಳಿಗೆ ಸೂಕ್ತ ನಿರ್ದೇಶನಕ್ಕಾಗಿ ಕೋರಿಕೆ.
6. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಎಲ್ಲಾ ಸ್ಥಳಿಯ ಸಂಸ್ಥೆಗಳ ಮುಖ್ಯಸ್ಥರು.
7. ಎಲ್ಲಾ ಮುಖ್ಯ ಪರಿಸರ ಅಧಿಕಾರಿಗಳು, ಕ.ರಾ.ಮಾ.ನಿ.ಮಂ, ರವರ ಮಾಹಿತಿಗಾಗಿ.
8. ಎಲ್ಲಾ ಪ್ರಾದೇಶಿಕ ಹಿರಿಯ ಪರಿಸರ ಅಧಿಕಾರಿಗಳು, ಕ.ರಾ.ಮಾ.ನಿ.ಮಂ, ರವರ ಮಾಹಿತಿಗಾಗಿ.
9. ಎಲ್ಲಾ ಪ್ರಾದೇಶಿಕ ಅಧಿಕಾರಿಗಳು, ಕ.ರಾ.ಮಾ.ನಿ.ಮಂ, ರವರ ಮಾಹಿತಿಗಾಗಿ ಹಾಗೂ ಗಣೇಶ ಹಬ್ಬದ ಪೂರ್ವ ಹಾಗೂ ನಂತರ ಕನಿಷ್ಠ 06 ಜಲಮಾದರಿಗಳನ್ನು ಮಂಡಳಿಯ ಕೇಂದ್ರ ಪ್ರಯೋಗಾಲಯವು ನಿಗಧಿಪಡಿಸಿದ ದಿನಾಂಕದಂದು ಸಂಗ್ರಹಿಸಿ ಸಲ್ಲಿಸುವುದು.
10. ಇತರೆ.

.........5

ಪ್ರತಿಯನ್ನು:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ, ಕರ್ನಾಟಕ ಸರ್ಕಾರ,
   ಬೆಂಗಳೂರು, ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2) ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು, ರವರ ಮಾಹಿತಿಗಾಗಿ ಸಲ್ಲಿಸಿದೆ.

ಹಿರಿಯ ಪರಿಸರ ಅಧಿಕಾರಿ